ಹುಬ್ಬಳ್ಳಿಯ ಕೆ.ಎಂ.ಸಿ. ಆಸ್ಪತ್ರೆಯಲ್ಲಿ ಔಷಧಿ ದೊರೆಯದೆ ರೋಗಿಗಳಿಗೆ ತೊಂದರೆ

342 - ಶ್ರೀ ಜಗದೀಶ ಶೆಟ್ಟರ (ಹುಬ್ಬಳ್ಳಿ ಗ್ರಾಮೀಣ) : ವೈದ್ಯಕೀಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಹುಬ್ಬಳ್ಳಿಯ ಕರ್ನಾಟಕ ಮೆಡಿಕಲ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸರಿಯಾದ ಶುಶ್ರೂಷೆ ದೊರೆಯದೆ ಔಷಧಿಗಳು ಸಿಗದೆ ತೊಂದರೆ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಆಸ್ಪತ್ರೆಯ ಸುಧಾರಣೆ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?*

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಬಂದಿದೆ

ಆ) ಜೀವ ರಕ್ಷಕ ಔಷಧಿಗಳನ್ನು ಸರ್ಕಾರಿ ಔಷಧಿ ಮಳಿಗೆಯಿಂದ ಮತ್ತು ನೇರ ಖರೀದಿಯಿಂದ ಸರಬರಾಜು ಮಾಡಲಾಗುತ್ತಿದೆ. ಜೀವ ರಕ್ಷಕ ಔಷಧಿಗಳನ್ನು ದಾಸ್ತಾನಿನಲ್ಲಿಡಲು ಆಸ್ಪತ್ರೆಯ ಅಧ್ಯಕ್ಷಕರಿಗೆ ನಿರ್ದೇಶನ ನೀಡಲಾಗಿದೆ. ಹಾಗೂ ಅಧ್ಯಕ್ಷಕರು ದಿನನಿತ್ಯದ ಔಷಧಿಗಳನ್ನು ಸ್ಥಳೀಯವಾಗಿ ಖರೀದಿಸಲು ಆದೇಶ ನೀಡಲಾಗಿದೆ.

ಕರ್ನಾಟಕ ಮೆಡಿಕಲ್ ಕಾಲೇಜನ್ನು ಈಗಾಗಲೇ ಸ್ವಾಯುತ್ತ ಸಂಸ್ಥೆಯಾಗಿ ಪರಿವರ್ತಿಸಿ ಆದೇಶ ಹೊರಡಿಸಿದೆ. ಮೆಡಿಕಲ್ ಕಾಲೇಜಿನ ವ್ಯಾಪ್ತಿಗೆ ಬರುವ ಮೆಡಿಕಲ್ ಕಾಲೇಜ್ ಆಸ್ಪತ್ರೆ ಹಾಗೂ ಇತರ ಆಸ್ಪತ್ರೆಗಳ ಅಭಿವೃದ್ಧಿಗೆ ಮತ್ತು ಸುಧಾರಣೆ ಬಗ್ಗೆ ಎಲ್ಲ ರೀತಿಯ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಸಿಂಧಗಿಯಲ್ಲಿ ಕ್ರೀಡಾಂಗಣ ನಿರ್ಮಾಣ

495 - ಶ್ರೀ ರವಿಕಾಂತ ಎಸ್. ಪಾಟೀಲ್ (ಇಂಡಿ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಇಂಡಿ ವಿಧಾನ ಕ್ಷೇತ್ರದಲ್ಲಿ ಹಾಗೂ ಸಿಂಧಿಗಿ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರದವರು ತೆಗೆದುಕೊಳ್ಳುವ ಕ್ರಮವೇನು?*

ಆ) *ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು*

ಶ್ರೀ ಅಜಯಕುಮಾರ್ ಸರ್ ನಾಯಕ್ (ಯುವಜನ ಸೇವಾ ಮತ್ತು ಕ್ರೀಡ ಸಚಿವರು) :

ಅ) ಹೌದು

ಇಲಾಖೆ ಕ್ರೀಡಾಂಗಣಕ್ಕೆ ಸೂಕ್ತವಾದ ಜಮೀನು ಪಡೆಯುವ ಬಗ್ಗೆ ಕ್ರಮ ತೆಗೆದುಕೊಂಡಿದೆ.

ಆ) ಕ್ರೀಡಾಂಗಣ ನಿರ್ಮಾಣಕ್ಕೆ ಸೂಕ್ತವಾದ ನಿವೇಶನ ದೊರೆತ ಕೂಡಲೇ ಕ್ರೀಡಾಂಗಣ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.